# 24 ಗಂಟೆಯೊಳಗೆ ಬೆಂಗಳೂರಿಗೆ ಬರುವೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು



• ಎಲ್ಲರ ಹಣ ವಾಪಸ್ ಮಾಡುವೆ - ವಿಡಿಯೊದಲ್ಲಿ ಮನ್ಸೂರ್ ಹೇಳಿಕೆ

ಐಎಂಎ ಕಂಪನಿಯ ಬಹುಕೋಟಿ ವಂಚನೆ ಪ್ರಕರಣದ ಪ್ರಮುಖ ರೂವಾರಿ ಹಾಗೂ ಐಎಂಎ ಕಂಪನಿಯ ಮುಖ್ಯಸ್ಥ ಮಹಮ್ಮದ್ ಮನ್ಸೂರ್ ಖಾನ್ ಮತ್ತೊಂದು ವಿಡಿಯೊ ಬಿಡುಗಡೆ ಮಾಡಿದ್ದು, 24 ಗಂಟೆಯೊಳಗೆ ರಾಜಧಾನಿ ಬೆಂಗಳೂರಿಗೆ ವಾಪಸಾಗುವ ಭರವಸೆ ನೀಡಿದ್ದಾನೆ. ಜತೆಗೆ ಎಲ್ಲರ ಹಣ ವಾಪಸ್ ನೀಡುವುದಾಗಿಯೂ ವಿಡಿಯೊದಲ್ಲಿ ತಿಳಿಸಿದ್ದಾನೆ.

ನಾನು ಬೆಂಗಳೂರಿಗೆ ಬಂದರೆ ಪೊಲೀಸರು ರಕ್ಷಣೆ ನೀಡುತ್ತಾರೆಯೇ ಎಂದು ಪ್ರಶ್ನಿಸಿದ್ದಾನೆ. ವಂಚನೆ ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ತಲೆಮರೆಸಿಕೊಂಡಿದ್ದ ಮಹಮ್ಮದ್ ಮನ್ಸೂರ್‌ಗಾಗಿ ಪೊಲೀಸರು ಶೋಧ ಆರಂಭಿಸಿದ್ದರು. ಅದಾದ ನಂತರ ಆದಷ್ಟು ಬೇಗ ಭಾರತಕ್ಕೆ ಬರುತ್ತೇನೆ ಎಂದು ವಿಡಿಯೋವನ್ನು ಮನ್ಸೂರ್ ಈ ಹಿಂದೆ ಬಿಡುಗಡೆ ಮಾಡಿದ್ದ. ಇದೀಗ ಅಜ್ಞಾತ ಸ್ಥಳದಿಂದ ಮತ್ತೊಂದು ವಿಡಿಯೊ ಮಾಡಿ ಯೂಟ್ಯೂಬ್‌ನಲ್ಲಿ ಹರಿಬಿಟ್ಟಿರುವ ಮನ್ಸೂರ್ 24 ಗಂಟೆಯೊಳಗೆ ಬೆಂಗಳೂರಿಗೆ ಬಂದು ತಮ್ಮ ಗ್ರಾಹಕರಿಗೆ ಹಣ ವಾಪಸು ಮಾಡುವ ಭರವಸೆ ನೀಡಿದ್ದಾನೆ. ನನಗೆ ಹುಷಾರಿಲ್ಲದ ಕಾರಣ ಬೆಡ್ ರೆಸ್ಟ್‌ನಲ್ಲಿದ್ದೆ. ಡಯಾಬಿಟಿಸ್ ಹಾಗೂ ಕೆಲ ಆರೋಗ್ಯದ ಸಮಸ್ಯೆಯಿಂದ ಬೆಡ್‌ರೆಸ್ಟ್‌ನಲ್ಲಿ ನಾನು ಇರಬೇಕಾಯಿತು ಎಂದಿರುವ ಮನ್ಸೂರ್, ಈ ಕಾರಣದಿಂದಲೇ ಗ್ರಾಹಕರಿಗೆ ಹಣ ವಾಪಸ್ ಮಾಡಲು ಸಮಯವಾಗುತ್ತಿದೆ ಎಂದಿದ್ದಾನೆ.

## ರೋಷನ್ ಬೇಗ್ ಬಂಧನ



ಬೆಂಗಳೂರು: ಐಎಂಎ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶಿವಾಜಿನಗರ ಶಾಸಕ ರೋಷನ್ ಬೇಗ್ ಅವರನ್ನು ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ವಿಮಾನ ನಿಲ್ದಾಣದಲ್ಲೇ ಹಿರಿಯ ಅಧಿಕಾರಿಗಳಿಂದ ಅವರ ವಿಚಾರಣೆ ನಡೆದಿದೆ ಎನ್ನಲಾಗಿದೆ. ಮುಂಬೈಗೆ ತೆರಳಲು ರೋಷನ್ ಬೇಗ್ ವಿಮಾನ ನಿಲ್ದಾಣಕ್ಕೆ ತೆರಳಿದ್ದ ವೇಳೆ ಎಸ್‌ಐಟಿ ಅಧಿಕಾರಿ ಗಿರೀಶ್ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಬಂಧಿಸಲಾಗಿದೆ. ಐಎಂಎ ವಂಚನೆ ಪ್ರಕರಣ ಸಂಬಂಧ ಜು.11ರಂದು ವಿಚಾರಣೆ ಗೆ ಹಾಜರಾಗಲು ಎಸ್‌ಐಟಿ ನೋಟಿಸ್ ನೀಡಿತ್ತು. ಆದರೆ ಅಂದು ಬೇಗ್ ಹಾಜರಾಗಿರಲಿಲ್ಲ. ಮತ್ತೆ ಜು.15ಕ್ಕೆ ಹಾಜರಾಗಲು ಸೂಚಿಸಲಾಗಿತ್ತು. ಅಂದೂ ಕೂಡ ಅವರು ಗೈರಾಗಿದ್ದರು. ಅನಿವಾರ್ಯ ಕಾರಣಗಳಿಂದ ನಾನು ವಿಚಾರಣೆಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ ನನಗೆ 10 ದಿನಗಳ ಕಾಲಾವಕಾಶ ನೀಡಬೇಕು ಎಂದು ತಮ್ಮ ಆಪ್ತ ಸಹಾಯಕನ ಮೂಲಕ ರೋಷನ್ ಬೇಗ್ ಪತ್ರ ಕಳುಹಿಸಿದ್ದಾರೆ. ಆದರೆ ತುರ್ತು ವಿಚಾರಣೆಯ ಕಾರಣ ಜುಲೈ 19 ರಂದು ವಿಚಾರಣೆಗೆ ಹಾಜರಾಗಲು ರೋಷನ್‌ಬೇಗ್ ಎಸ್‌ಐಟಿ ತನಿಖಾಧಿಕಾರಿ ಡಿಸಿಪಿ ಗಿರೀಶ್ ಎರಡನೇ ನೋಟಿಸ್ ಜಾರಿಗೊಳಿಸಿದ್ದರು.